ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ - ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 6-3-2021

# ಏಕ ಚುನಾವಣೆ ಚರ್ಚೆಗೆ ಮತ್ತೆ ಪ್ರಯತ್ನ: ಕಾಗೇರಿ

## ಮಂಗಳವಾರ ಕಲಾಪ ಸಮಿತಿ ಸಭೆ | ಆ ವೇಳೆ ಚರ್ಚೆಗೆ ವಿಪಕ್ಷಗಳ ಮನವೊಲಿಕೆ ಯತ್ನ

● ಕನ್ನಡಪ್ರಭ ವಾರ್ತೆ ಬೆಂಗಳೂರು

ವಿಧಾನಸಭೆಯಲ್ಲಿ ಒಂದು ದೇಶ, ಒಂದು ಚುನಾವಣೆ ಕುರಿತು ಸುಗಮವಾಗಿ ಚರ್ಚೆ ನಡೆಯದಿರುವುದಕ್ಕೆ ಬೇಸರ ವ್ಯಕ್ತಪಡಿಸಿರುವ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಪ್ರತಿಪಕ್ಷ ನಾಯಕರ ಜತೆ ಮತ್ತೊಮ್ಮೆ ಚರ್ಚಿಸಿ ಮನವೊಲಿಕೆ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಶುಕ್ರವಾರ ವಿಧಾನಸೌಧದಲ್ಲಿನ ತಮ್ಮ ಕಚೇರಿಯಲ್ಲಿ ಪತ್ರಕರ್ತರ ಜತೆ ಅನೌಪಚಾರಿಕ ಮಾತುಕತೆ ನಡೆಸಿದ ಅವರು, ವಿಧಾನಸಭೆಯಲ್ಲಿ ಒಂದು ದೇಶ, ಒಂದು ಚುನಾವಣೆ ಬಗ್ಗೆ ಚರ್ಚಿಸಲು ಈ ಹಿಂದೆಯೇ ತೀರ್ಮಾನವಾಗಿತ್ತು. ಚರ್ಚೆಯಲ್ಲಿ ಭಾಗವಹಿಸಲು ಕಾಂಗ್ರೆಸ್‌ನಿಂದ 19 ಸದಸ್ಯರು, ಬಿಜೆಪಿಯಿಂದ 15 ಮತ್ತು ಜೆಡಿಎಸ್‌ನಿಂದ 13 ಸದಸ್ಯರು ಹೆಸರು ಕೊಟ್ಟಿದ್ದರು. ಆದರೆ, ಈಗ ಕಾಂಗ್ರೆಸ್‌ನವರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಬಜೆಟ್ ಅಧಿವೇಶನ ಈ ತಿಂಗಳು ಪೂರ್ತಿ ನಡೆಯುವುದರಿಂದ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ನಾಯಕರ ಮನವೊಲಿಕೆಗೆ ಮತ್ತೊಮ್ಮೆ ಪ್ರಯತ್ನಿಸಿ ಚರ್ಚೆಯಲ್ಲಿ ಭಾಗವಹಿಸುವಂತೆ ಮನವಿ ಮಾಡುತ್ತೇನೆ ಎಂದರು.

ಸದನದಲ್ಲಿ ಚರ್ಚೆ ನಡೆದರೆ ಅದರ ಮಹತ್ವವೇ ಬೇರೆ



ಇರುತ್ತದೆ. ಹೀಗಾಗಿ ಸದನದಲ್ಲಿ ಚರ್ಚೆ ನಡೆಸಲು ಸಾಕಷ್ಟು ಪ್ರಯತ್ನಿಸುತ್ತಿದ್ದೇನೆ. ಒಂದು ವೇಳೆ ಸಾಧ್ಯವಾಗದಿದ್ದರೆ ಸಮ್ಮೇಳನ ಸಭಾಂಗಣದಲ್ಲಿ ಕಾರ್ಯಕ್ರಮ ಆಯೋಜಿಸಿ ಚರ್ಚಿಸುವ ಚಿಂತನೆ ನಡೆಸಲಾಗುವುದು. ಮಂಗಳವಾರ ಕಲಾಪ ಸಲಹಾ ಸಮಿತಿ ಸಭೆ ನಡೆಸಿ ಮಾತುಕತೆ ನಡೆಸಲಾಗುವುದು. ಮೊದಲ ಬಾರಿಗೆ ಒಂದು ಸರ್ಕಾರದ ಚೌಕಟ್ಟಿನೊಳಗೆ ಚರ್ಚೆ ನಡೆಸಲು ಪ್ರಯತ್ನಿಸಲಾಗುತ್ತಿದೆ. ಒಂದು ದೇಶ, ಒಂದು ಚುನಾವಣೆ ಕುರಿತ ಚರ್ಚೆ ಅಪೂರ್ಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

## ಸಂಗಮೇಶ್ ವಿರುದ್ಧ ಕ್ರಮಕ್ಕೆ ಸಮರ್ಥನೆ

ಭದ್ರಾವತಿ ಶಾಸಕ ಸಂಗಮೇಶ್ ಅವರನ್ನು ಸದನದ ಒಟ್ಟಿಗೆ ಮೀರಿಗೆ ಅಮಾನತು ಮಾಡಲಾಗಿದೆ. ನಿಯಮ 348ರಡಿ ಕ್ರಮ ಜರುಗಿಸಲಾಗಿದೆ. ಸರ್ಕಾರವು ತೆರವುಗೊಳಿಸುವ ಪ್ರಸ್ತಾವನೆ ಮುಂದಿಟ್ಟರೆ ನನ್ನ ಅಭ್ಯಂತರ ಇಲ್ಲ. ಆದರೆ, ಕಾಂಗ್ರೆಸ್‌ನ ಹಿರಿಯ ಸದಸ್ಯರು ಸದನದೊಳಗೆ ಕರೆತಂದಿದ್ದು ಸರಿಯಲ್ಲ. ಈ ಹಿಂದೆ ಬೆಳಗಾವಿ ಅಧಿವೇಶನದಲ್ಲಿ ಮೊಬೈಲ್ ನೋಡಿದ್ದಕ್ಕೆ ಸಚಿವರಾಗಿರುವ ಪ್ರಭು . ಚವ್ಹಾಣ್ ಅವರನ್ನು ಸಭಾಧ್ಯಕ್ಷರಾಗಿದ್ದ ಕಾಗೋಡು ತಿಮ್ಮಪ್ಪ ಅವರು ಒಂದು ದಿನದ ಮಟ್ಟಿಗೆ ಹೊರಗೆ ಕಳುಹಿಸಿದ್ದರು ಎಂದು ಇದೇ ವೇಳೆ ಸ್ಪೀಕರ್ ವಿಶ್ವೇಶ್ವರ್ ಹೆಗಡೆ ಕಾಗೇರಿ ಹೇಳಿದರು.